# ಜಿಲ್ಲಾಧಿಕಾರಿಗಳ ಕಾರ್ಯಾಲಯ ಧಾರವಾಡ

## ಪ್ರಕಟಣೆ

**ಅಧಿಸೂಚನೆ ಸಂಖ್ಯೆ ಸಿಬ್ಬಂದಿ-3/ಇತರೆ /ವಹಿ- 21/2008-09 ದಿನಾಂಕ : 26-09-2009**

ಧಾರವಾಡ ಜಿಲ್ಲಾ ಕಂದಾಯ ಘಟಕದಲ್ಲಿ ಗ್ರುಪ್ ಸಿ ವೃಂದದ ಗ್ರಾಮ ಲೆಕ್ಕಾಧಿಕಾರಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಈ ಕೆಳಗೆ ನಮೂದಿಸಿದ ಷರತ್ತುಗಳನ್ನು ಒಳಗೊಂಡಂತೆ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ ಕಾರ್ಯದರ್ಶಿಗಳು ಗ್ರಾಮಲೆಕ್ಕಾಧಿಕಾರಿಗಳ ನೇಮಕಾತಿ ಸಮಿತಿ ಹಾಗೂ ಅಪರ ಜಿಲ್ಲಾಧಿಕಾರಿಗಳು ಧಾರವಾಡ ಇವರಿಗೆ ದಿನಾಂಕ 30-10-2009 ರಂದು ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೋರಿಯರ ಮೂಲಕ ಮಾತ್ರ ಕಳುಹಿಸುವದು. ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವ ಅಧಿಕಾರ ಜಿಲ್ಲಾದಿಕಾರಿಗಳಿಗೆ ಇರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾ ಗುವದಿಲ್ಲ.

| ಅ.ನಂ. | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮ ಲೆಕ್ಕಾಧಿಕಾರಿ | 57 | ಪಿಯುಸಿ ಅಥವಾ ಕೇಂದ್ರೀಯ ಮಂಡಳಿಯಿಂ, ಜರುಗಿದ ಮಾದ್ಯಮಿಕ ಶಿಕ್ಷಣ 12ನೇ ತರಗತಿ ಅಥವಾ ICSE ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು . | 5800-10500 |

**ವರ್ಗೀಕರಣ:**

| ಅ. ನಂ. | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಕ.ಮಾ.ಅ | ಯೋ.ನಿ.ಅ. | ಅಂ.ವಿ | ಒಟ್ಟು |
| 1 | ಗ್ರಾಮ ಲೆಕ್ಕಾಧಿಕಾರಿ | 57 | ಪ.ಜಾ. | 2 | 3 | 3 | - | - | - | 1 | 9 |
| | | | ಪ.ಪಂ. | 1 | 1 | - | - | - | - | - | 2 |
| | | | ಪ್ರ.-I | 1 | 1 | 1 | - | - | - | - | 3 |
| | | | ಪ್ರ-II (ಎ) | 2 | 3 | 3 | - | - | - | 1 | 9 |
| | | | ಪ್ರ-II (ಬಿ) | 1 | 1 | - | - | - | - | - | 2 |
| | | | ಪ್ರ-III (ಎ) | 1 | 1 | - | - | - | - | - | 2 |
| | | | ಪ್ರ-III (ಬಿ) | 1 | 1 | - | - | - | - | - | 2 |
| | | | ಸಾ.ಅ. | 6 | 9 | 7 | 2 | 1 | 1 | 2 | 28 |
| **ಒಟ್ಟು** | | | | **15** | **20** | **14** | **2** | **1** | **1** | **4** | **57** |

**ಹುದ್ದೆಗಳ ವರ್ಗೀಕರಣದ ರೋಷ್ಟರಿನ ಪ್ರಾರಂಭಿಕ ಬಿಂದು-1**

| | | | |
|---|---|---|---|
| 1. | ಮ.ಅ | - | ಮಹಿಳಾ ಅಭ್ಯರ್ಥಿ |
| 2. | ಗ್ರಾ.ಅ. | - | ಗ್ರಾಮೀಣ ಅಭ್ಯರ್ಥಿ |
| 3. | ಅಂ.ವಿ. | - | ಅಂಗವಿಕಲ ಅಭ್ಯರ್ಥಿ |
| 4. | ಮಾ.ಸೈ. | - | ಮಾಜಿ ಸೈನಿಕ |
| 5 | ಕ.ಮಾ.ಅ. | - | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ |
| 6. | ಯೋ.ಅ. | - | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ |

**<u>ಅಭ್ಯರ್ಥಿಗಳಿಗೆ ಸೂಚನೆ ಮತ್ತು ಶರ್ತುಗಳು:</u>**

1. ಅರ್ಜಿಗಳನ್ನು ಅಂಚೆ ಅಥವಾ ಕೋರಿಯರ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವದಿಲ್ಲ.
2. **<u>ವಯೋಮಿತಿ-</u>** ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | |
|---|---|
| ಪ.ಜ್/ಪ.ಪಂ/ಪ್ರ ವರ್ಗ-1 | : ಕನಿಷ್ಠ 18 ಗರಿಷ್ಠ 40 ವರ್ಷಗಳು |
| ಹಿಂದುಳಿದ ವರ್ಗ | : ಕನಿಷ್ಠ 18 ಗರಿಷ್ಠ 38 ವರ್ಷಗಳು |
| ಸಾಮಾನ್ಯ ವರ್ಗ | : ಕನಿಷ್ಠ 18 ಗರಿಷ್ಠ 35 ವರ್ಷಗಳು |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟು ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರಕಾರದ ಸ್ವಾಮ್ಯೆ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೂ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದೊ ಕಡಿಮೆಯೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವವೊ ಅಷ್ಟು ವರ್ಷಗಳು.

ಇ) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ 10 ವರ್ಷಗಳು.

ಈ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು.ಅರ್ಜಿಯನ್ನು ವೆಬ್‌ಸೈಟ್ **http://www.dharwad.nic.in** ದಿಂದ ಅರ್ಜಿ ಪಡೆದುಕೊಳ್ಳಬೇಕು, ಅಥವಾ ಈ ಕಚೇರಿಯಿಂದಾಗಲಿ / ಉಪ ವಿಭಾಗಾಧಿಕಾರಿಗಳು ಧಾರವಾಡ ಉಪ ವಿಭಾಗ ಧಾರವಾಡ / ತಹಶೀಲ್ದಾರ, ಧಾರವಾಡ / ಹುಬ್ಬಳ್ಳಿ / ಕಲಘಟಗಿ / ನವಲಗುಂದ / ಕುಂದಗೋಳ ಇವರಿಂದ ಸ್ವತ: ಪಡೆದುಕೊಳ್ಳಬಹುದು. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
5. ನಿಗಧಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
6. ಸರಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ/ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವದು.
7. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
8. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
9. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶ ಇರುವದಿಲ್ಲ.
10. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

11. ಮೇಲಿನ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಧಾರವಾಡ ಇವರು ಕಾಯ್ದಿರಿಸಿಕೊಂಡಿರುತ್ತಾರೆ.

12. ಪ.ಜಾತಿ/ಪ.ಪಂಗಡ ಮತ್ತು ಪ್ರವರ್ಗ-1 ಅಭ್ಯರ್ಥಿಗಳು ರು.100-00 ಹಾಗೂ ಇತರರಿಗೆ ರು.200-00 ಗಳಿಗೆ ಬ್ಯಾಂಕ ಡಿ.ಡಿಯನ್ನು ಕಾರ್ಯದರ್ಶಿಗಳು ಗ್ರಾಮ ಲೆಕ್ಕಾಧಿಕಾರಿಗಳ ನೇಮಕಾತಿ ಸಮಿತಿ ಹಾಗೂ ಅಪರ ಜಿಲ್ಲಾಧಿಕಾರಿಗಳು ಧಾರವಾಡ ಅವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸಿತಕ್ಕದ್ದು. ಮತ್ತು ಡಿ.ಡಿ.ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಧಾರವಾಡದಲ್ಲಿ ಸಂದಾಯವಾಗುವಂತೆ ಮಾತ್ರ ಖರೀದಿಸತಕ್ಕದ್ದು. ಹಾಗೂ ಡಿ.ಡಿ. ಹಿಂದೆ ಅಭ್ಯಥಿಯ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ.ಡಿ.ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವದು.

13. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವದಿಲ್ಲ.

14. ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

15. ಅಂಚೆ ವಿಳಂಬಕ್ಕೆ ನೇಮಕಾತಿ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.

16. **<u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು.</u>**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗಧಿತ ನಮೂನೆಯಲ್ಲಿ ಸಂಬಂದಪಟ್ಟ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿ ತನವನ್ನು ನೇಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ/ಪ.ಪಂ, ಪ್ರವರ್ಗ-1- ಸರಕಾರದ ಅಧಿಸೂಚನೆ SWD/132/SAD/97 ದಿನಾಂಕ 08-02-2000 ರನ್ವಯ ಕ್ರಮವಾಗಿ ನಮೂನೆ-1 ಹಾಗೂ 2.

ಪ್ರವರ್ಗ-2ಎ, 2ಬಿ, 3ಎ, 3ಬಿ - ಸರಕಾರದ ಅಧಿಸೂಚನೆ SWD/126/BCA/ ದಿನಾಂಕ 13-12-2003 ರನ್ವಯ ನಮೂನೆ-3. ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿ ಇರಬೇಕು.

17. **<u>ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:</u>**

ಸರಕಾರಿ ಆದೇಶ ನಂ. ಸಿಆಸುಇ/71/ಸೇನೆನಿ/2001 ದಿನಾಂಕ 24-10-2002 ರನ್ವಯ ಶೇಕಡಾ 5 ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿಡಲಾಗಿದೆ, ಈ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂದಿಸಿದ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದು ಲಗತ್ತಿಸಬೇಕು.

18. **<u>ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:</u>**

ಮಾಜಿ ಸೈನಿಕರು ಎಂಬುದರ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

19. **<u>ಅಂಗವಿಕಲ ಕುಟುಂಬದ ಅಭ್ಯರ್ಥಿಗಳು:</u>**

ಅಂಗವಿಕಲ ಅಭ್ಯರ್ಥಿ ಎಂದರೆ,

(ಎ) (ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿ ಉತ್ತಮವಾದ ಪೈಕಿ 6:60 ಅಥವಾ 20:200 (ಸ್ನೆಲನ್) ಅನ್ನು ಮೀರದಿರುವ ದೃಷ್ಟಿ ಸಾಮರ್ಥ ಇರುವ ವ್ಯಕ್ತಿ

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವದಿಲ್ಲ.

(ಬಿ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣಶಕ್ತಿಯು 90 ಡೆಸಿಬಲಗಳಿಗೂ ಹೆಚ್ಚು ತಗ್ಗಿಸುವ (ಅತ್ಯಂತ ಕಡಿಮೆ ಶ್ರವಣಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂದರ್ಭದಲ್ಲಿ ಶ್ರವಣೇಂದ್ರಿಯ ನಿಷ್ಕ್ರಿಯವಾಗಿದ್ದರೆ ಅಂಥಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಸಿ) ಮೂಳೆಗಳು ಮೌಂಸ ಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವದಿಲ್ಲ.

(ಡಿ) ರಾಜ್ಯದ ಸರಕಾರಿ ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಪ್ರಾಧಿಕಾರ ಹೊಂದಿರುವರಾಗಿರುತ್ತಾರೆ.

(ಇ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಅರ್ಥೋಪೆಡಿಕ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಅಲ್ಮಿಕೋ ಕಾನ್‌ಪುರ್ (WHO Standard)ಇದರ ಆಧಾರದ ಮೇಲೆ ಮಾಡಿಸುವದು ಕಡ್ಡಾಯವಾಗಿ-ರುತ್ತದೆ.

ಸರಕಾರದ ಆದೇಶ ನಂ. ಡಿಪಿಎಆರ್/07/ಸೇಸ್ಥಿಅ/94 ದಿನಾಂಕ 13-09-1995 ರಲ್ಲಿ ನಿಗಧಿ ಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರ ಮತ್ತು ಅಂಗವಿಕಲತೆ ಪ್ರಮಾಣ ಪತ್ರವು ಶೇಕಡಾ 40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿವು ಪಡೆದುಕೊಂಡಿರಬೇಕು.

20. **<u>ಗ್ರಾಮೀಣ ಅಭ್ಯರ್ಥಿಗಳು:</u>**

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ನೇಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ. ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ ಒಂದನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದು ಅದರ ಒಂದೊಂದು ಝರಾಕ್ಸ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಾಗೂ ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ/ಪ.ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣ ಅಧಿಕಾರಿಗಳಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ದೃಢೀಕೃತ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

21. **<u>ಕನ್ನಡ ಮಾಧ್ಯಮ ಅಭ್ಯಥಿಗಳು:</u>**

ಸರಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್/71/ಎಸ್.ಆರ್.ಆರ್/2001 ದಿನಾಂಕ 24-10-2002 ರಲ್ಲಿ ಹೊರಡಿಸಿದ ಕರ್ನಾಟಕ ಸರಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1) (ಸಿ) ರ ಅನ್ವಯ ಅಭ್ಯರ್ಥಿಯು 1 ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾದ್ಯಯರಿಂದ ಸಹಿ ಹಾಗೂ ಮೊಹರು ಮಾಡಿದ ಪ್ರಮಾಣ ಪತ್ರದ ಪ್ರತಿಯೊಂದಿಗೆ ಲಗತ್ತಿಸಬೇಕು.

22. **<u>ಅರ್ಹತಾ ಷರತ್ತುಗಳು:</u>**

ಅ) ಭಾರತೀಯ ನಾಗರಿಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು. ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆಂತಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರವು ಕಾಯ್ದಿರಿಸಿಕೊಳ್ಳಲಾಗಿದೆ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

23. **ಕೆಳಕಂಡ ದೃಢೀಕೃತ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಲಾಗಿದೆ ಎಂದು ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳಬೇಕು.**

1) ಹುದ್ದೆಗಳಿಗೆ ನಿಗದಿ ಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ಸೆಮಿಸ್ಟರಗಳ ಅಂಕ ಪಟ್ಟಿ ಹಾಗೂ ಪ್ರಮಾಣ ಪತ್ರಗಳು.
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3) ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ. (ಮಾಜಿ ಮೀಸಲಾತಿ ಕೋರಿದ್ದಲ್ಲಿ)
4) ಪ.ಜಾತಿ/ಪ.ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
5) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದಲ್ಲಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ. (ಮೀಸಲಾತಿ ಕೋರಿದ್ದಲ್ಲಿ)
8) ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ. (ಮೀಸಲಾತಿ ಕೋರಿದ್ದಲ್ಲಿ)
9) ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
10) ಒಬ್ಬರು ಗಣ್ಯವ್ಯಕ್ತಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ.

ಮೇಲ್ಕಂಡಂತೆ ನಿಗದಿ ಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

24. **<u>ಇತರೆ ಸೂಚನೆಗಳು:</u>**

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೊ ಪ್ರತಿಯನ್ನು ತಮ್ಮೊಂದಿಗೆ ಇಟ್ಟಿಕೊಳ್ಳಲು ಸೂಚಿಸಿದೆ.
2) ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವದು.

ಅಧ್ಯಕ್ಷರು
ಗ್ರಾಮಲೆಕ್ಕಾಧಿಕಾರಿ ನೇಮಕಾತಿ ಸಮಿತಿ ಹಾಗೂ
ಜಿಲ್ಲಾಧಿಕಾರಿಗಳು ಧಾರವಾಡ